**All India Radio: Bangalore**
**National Bulletin In Kannada**
**04.03.2026  1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**04.03.2026  1.10 p.m.**
**<><><><>**

ಮುಖ್ಯಾಂಶಗಳು

1. ಐದನೇ ದಿನಕ್ಕೆ ಕಾಲಿಟ್ಟ ಪಶ್ಚಿಮ ಏಷ್ಯಾ ಸಂಘರ್ಷ; ಇರಾನ್ ಪರಮಾಣು ಶಸ್ತ್ರಾಸ್ತ್ರ ಅಭಿವೃದ್ಧಿ ಕೇಂದ್ರದ ಮೇಲೆ ಇಸ್ರೇಲ್ ದಾಳಿ
2. ಅಧಿಕೃತ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿದ ಫಿನ್‌ಲ್ಯಾಂಡ್ ಅಧ್ಯಕ್ಷ ಅಲೆಗ್ಸಾಂಡರ್ ಸ್ಟಬ್
3. ವಿಮಾನ ನಿಲ್ದಾಣ ಯೋಜನೆಗಳ ಕುರಿತು ನವದೆಹಲಿಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಕೇಂದ್ರ ಸಚಿವ ರಾಮ್‌ಮೋಹನ್ ನಾಯ್ಡು ಪರಿಶೀಲನಾ ಸಭೆ
4. ಆಲ್ ಇಂಗ್ಲೆಂಡ್ ಮುಕ್ತ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್; ಪುರುಷರ ಸಿಂಗಲ್ಸ್‌ನಲ್ಲಿಂದು ಭಾರತದ ಆಯೂಷ್ ಶೆಟ್ಟಿ ಸ್ಪರ್ಧೆ
5. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೆಮಿಫೈನಲ್‌ನಲ್ಲಿಂದು ದಕ್ಷಿಣ ಆಫ್ರಿಕಾ - ನ್ಯೂಜಿಲೆಂಡ್ ಹಣಾಹಣಿ

<><><><>

ಪಶ್ಚಿಮ ಏಷ್ಯಾದಲ್ಲಿ ಉಲ್ಬಣಿಸಿರುವ ಸಂಘರ್ಷ ಐದನೇ ದಿನಕ್ಕೆ ಕಾಲಿಟ್ಟಿದ್ದು, ಇಸ್ರೇಲ್ ಮತ್ತು ಅಮೆರಿಕದ ಜಂಟಿ ಪಡೆಗಳು ಇರಾನ್ ರಾಜಧಾನಿ ಟೆಹ್ರಾನ್‌ನಲ್ಲಿರುವ ಪರಮಾಣು ಸಂಶೋಧನಾ ಕೇಂದ್ರಗಳ ಮೇಲೆ ಭೀಕರ ದಾಳಿ ನಡೆಸಿವೆ. ಇತ್ತೀಚಿನ ವರದಿಗಳ ಪ್ರಕಾರ ಇರಾನ್‌ನ ಪರಮಾಣು ಶಸ್ತ್ರಾಸ್ತ್ರ ಅಭಿವೃದ್ಧಿ ಕೇಂದ್ರಗಳನ್ನು ಗುರಿಯಾಗಿಸಿಕೊಂಡು ಇಸ್ರೇಲ್ ತನ್ನ ಗುಪ್ತಚರ ಮಾಹಿತಿಯ ಆಧಾರದ ಮೇಲೆ ನಿಖರ ದಾಳಿ ನಡೆಸಿದೆ. ಇದಕ್ಕೆ ಪ್ರತಿಯಾಗಿ ಇರಾನ್ ಸಹ ವಿವಿಧ ರಾಷ್ಟ್ರಗಳ ಮೇಲೆ ಪುನಃ ಡ್ರೋನ್ ದಾಳಿಗಳನ್ನು ಮುಂದುವರಿಸಿದೆ. ಇಸ್ರೇಲ್ ತನ್ನ ಕಾರ್ಯಾಚರಣೆಯನ್ನು ಲೆಬನಾನ್ ಪ್ರಾಂತ್ಯಕ್ಕೂ ವಿಸ್ತರಿಸಿದ್ದು, ಹೆಜ್ಬುಲ್ಲಾ ಸಂಘಟನೆಗೆ ಸೇರಿದ ಸುಮಾರು ೬೦ ಕ್ಕೂ ಹೆಚ್ಚು ನೆಲೆಗಳ ಮೇಲೆ ದಾಳಿ ನಡೆಸಿದೆ. ಲೆಬನಾನ್‌ನ ಟೈರ್ ಮತ್ತು ಸಿಡಾನ್ ಪ್ರದೇಶಗಳಲ್ಲಿರುವ ಶಸ್ತ್ರಾಸ್ತ್ರ ಸಂಗ್ರಹಾಗಾರಗಳು, ಕ್ಷಿಪಣಿ ಉಡಾವಣಾ ಕೇಂದ್ರಗಳು ಮತ್ತು ನಿಯಂತ್ರಣ ಕೇಂದ್ರಗಳನ್ನು ಇಸ್ರೇಲ್ ವಾಯುಪಡೆ ಧ್ವಂಸಗೊಳಿಸಿದೆ. ಈ ನಡುವೆ ಪಶ್ಚಿಮ ಏಷ್ಯಾದ ಸಂಘರ್ಷದ ಪರಿಣಾಮ ಸೈಪ್ರಸ್ ದಾಳಿಗೊಳಗಾದ ನಂತರ ಯುಕೆ ಮತ್ತು ಫ್ರಾನ್ಸ್ ದೇಶಗಳು ತಮ್ಮ ಯುದ್ಧ ನೌಕೆ ಮತ್ತು ವಾಯು ರಕ್ಷಣಾ ವ್ಯವಸ್ಥೆಗಳನ್ನು ಸೈಪ್ರಸ್‌ನಲ್ಲಿ ನಿಯೋಜಿಸುತ್ತಿವೆ. ಈ ಕುರಿತು ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್, ಸೈಪ್ರಸ್ ಭದ್ರತೆ ಮತ್ತು ಅಲ್ಲಿರುವ ಬ್ರಿಟನ್ ಸೇನಾ ಸಿಬ್ಬಂದಿಯ ರಕ್ಷಣೆಗೆ ತಮ್ಮ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

<><><><>

ಅಧಿಕೃತ ಭಾರತ ಭೇಟಿಗಾಗಿ ಫಿನ್‌ಲ್ಯಾಂಡ್ ಅಧ್ಯಕ್ಷ ಅಲೆಗ್ಸಾಂಡರ್ ಸ್ಟಬ್ ನವದೆಹಲಿಗೆ ಇಂದು ಬೆಳಗ್ಗೆ ಆಗಮಿಸಿದರು. ಅವರನ್ನು ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿವರ್ಧನ್ ಸಿಂಗ್ ಬರಮಾಡಿಕೊಂಡರು. ವಿಮಾನ ನಿಲ್ದಾಣದಲ್ಲಿ ಅವರಿಗೆ ಗೌರವ ರಕ್ಷೆ ಜೊತೆಗೆ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಅಧ್ಯಕ್ಷ ಅಲೆಗ್ಸಾಂಡರ್ ಸ್ಟಬ್ ಈ ಬಾರಿಯ ರೈಸಿನಾ ಸಂವಾದ -೨೦೨೬ರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಹಾಗೂ ಪ್ರಮುಖ ಭಾಷಣಕಾರರಾಗಿ ಭಾಗವಹಿಸುತ್ತಿದ್ದಾರೆ. ಭಾರತಕ್ಕೆ ಆಗಮಿಸಿದ ಬಳಿಕ

ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಈ ಭೇಟಿಯು ಫಿನ್‌ಲ್ಯಾಂಡ್ ಮತ್ತು ಭಾರತದ ನಡುವಿನ ವ್ಯಾಪಾರ ಸೇರಿದಂತೆ ವಿವಿಧ ಕ್ಷೇತ್ರಗಳ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲಿದೆ ಎಂಬ ಆಶಯ ವ್ಯಕ್ತಪಡಿಸಿದ್ದಾರೆ. ಫಿನ್‌ಲ್ಯಾಂಡ್ ಅಧ್ಯಕ್ಷರನ್ನು ಸ್ವಾಗತಿಸಿರುವ ಪ್ರಧಾನಿ ನರೇಂದ್ರ ಮೋದಿ, ಅವರ ಈ ಭೇಟಿ ಉಭಯ ರಾಷ್ಟ್ರಗಳ ಬಾಂಧವ್ಯವನ್ನು ಹೊಸ ಎತ್ತರಕ್ಕೆ ಕೊಂಡಯ್ಯಲಿದೆ. ನಾಳೆ ನಡೆಯಲಿರುವ ದ್ವಿಪಕ್ಷೀಯ ಸಭೆ ಹಾಗೂ ರೈಸಿನಾ ಸಂವಾದದಲ್ಲಿ ಅವರು ನೀಡಲಿರುವ ಭಾಷಣವನ್ನು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ.

<><><>

ನವದೆಹಲಿಯಲ್ಲಿಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು, ವಿಜಯವಾಡ ವಿಮಾನ ನಿಲ್ದಾಣದ ನೂತನ ಟರ್ಮಿನಲ್ ಹಾಗೂ ಭೋಗಾಪುರಂನ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣ ಯೋಜನೆಗಳ ಕುರಿತು ಪ್ರಮುಖ ಹಿರಿಯ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಪಾಲುದಾರರೊಂದಿಗೆ ಪರಿಶೀಲನಾ ಸಭೆ ನಡೆಸಿದರು.ಈ ಸಭೆಯಲ್ಲಿ, ನಾಗರಿಕ ವಿಮಾನಯಾನ ಸಚಿವಾಲಯದ ಹಿರಿಯ ಅಧಿಕಾರಿಗಳು, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ-ಎಎಐ, ನಾಗರಿಕ ವಿಮಾನಯಾನ ಮಹಾ ನಿರ್ದೇಶನಾಲಯ ಡಿಜಿಸಿಎ ಅಧಿಕಾರಿಗಳು ಭಾಗವಹಿಸಿದ್ದರು. ಈ ಎರಡು ಯೋಜನೆಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಯೋಜನಾ ನಿರ್ವಾಹಕರೊಂದಿಗೆ ಸಮಗ್ರವಾಗಿ ಚರ್ಚಿಸಲಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

<><><>

ಪಶ್ಚಿಮ ಏಷ್ಯಾದಲ್ಲಿ ಸಿಲುಕಿರುವ ಪ್ರಯಾಣಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು, ಇಂಡಿಗೋದ ೩೦ ಹಾಗೂ ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್‌ನ ೧೩ ವಿಮಾನಗಳು ಸೇರಿದಂತೆ ಭಾರತೀಯ ವಿಮಾನಯಾನ ಸಂಸ್ಥೆಗಳು ಇಂದು ೫೮ ವಿಮಾನಗಳನ್ನು ನಿರ್ವಹಿಸಲು ಯೋಜಿಸುತ್ತಿವೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ಮಾಹಿತಿ ನೀಡಿದೆ. ಪಶ್ಚಿಮ ಏಷ್ಯಾದ ಕೆಲವು ಭಾಗಗಳಲ್ಲಿ ವಾಯುಪ್ರದೇಶದ ಪರಿಸ್ಥಿತಿ ಬದಲಾಗುತ್ತಿರುವುದರಿಂದ, ಭಾರತೀಯ ವಿಮಾನಯಾನ ಸಂಸ್ಥೆಗಳ ಒಂದು ಸಾವಿರದ ೧೦೦ ಕ್ಕೂ ಹೆಚ್ಚು ವಿಮಾನಗಳು ಮತ್ತು ವಿದೇಶಿ ವಿಮಾನ ಸಂಸ್ಥೆಗಳ ಸುಮಾರು ೩೮೦ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದ್ದು, ಸಿಲುಕಿಕೊಂಡಿರುವ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗುವಂತೆ ವಿಶೇಷ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ. ಅಗತ್ಯವಿರುವಲ್ಲಿ ವಿಮಾನಯಾನ ಸಂಸ್ಥೆಗಳು ಹೆಚ್ಚುವರಿ ಸಾಮರ್ಥ್ಯವನ್ನು ನಿಯೋಜಿಸುತ್ತಿವೆ ಎಂದು ಸಚಿವಾಲಯ ತಿಳಿಸಿದೆ. ಭಾರತೀಯ ವಿಮಾನಯಾನ ಸಂಸ್ಥೆಗಳು, ತಮ್ಮ ವೇಳಾಪಟ್ಟಿಗಳಲ್ಲಿ ಬದಲಾವಣೆಗಳನ್ನು ಮಾಡಿಕೊಂಡಿವೆ. ನಿರ್ಬಂಧಿತ ವಾಯುಪ್ರದೇಶವನ್ನು ತಪ್ಪಿಸುವ ಪರ್ಯಾಯ ಮಾರ್ಗಗಳ ಮೂಲಕ ದೀರ್ಘ ಮತ್ತು ಅತಿ ದೀರ್ಘ-ಪ್ರಯಾಣದ ಕಾರ್ಯಾಚರಣೆಗಳನ್ನು ಕ್ರಮೇಣ ಪುನರಾರಂಭಿಸಲಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ. ವಿಮಾನಯಾನ ಸಂಸ್ಥೆಗಳೊಂದಿಗೆ ಸಚಿವಾಲಯ ನಿರಂತರ ಸಂಪರ್ಕದಲ್ಲಿದ್ದು, ಈ ಅವಧಿಯಲ್ಲಿ ಟಿಕೆಟ್ ಬೆಲೆಗಳಲ್ಲಿ ಅನಗತ್ಯ ಏರಿಕೆಯಾಗದಂತೆ ಖಚಿತಪಡಿಸಿಕೊಳ್ಳಲು ವಿಮಾನ ದರಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ಸಚಿವಾಲಯ ಭರವಸೆ ನೀಡಿದೆ. ಪ್ರಯಾಣಿಕರು ವಿಮಾನ ನಿಲ್ದಾಣಕ್ಕೆ ಹೋಗುವ ಮೊದಲು ಆಯಾ ವಿಮಾನಯಾನ ಸಂಸ್ಥೆಗಳೊಂದಿಗೆ ಇತ್ತೀಚಿನ ವಿಮಾನ ಸ್ಥಿತಿಯನ್ನು ನೇರವಾಗಿ ಪರಿಶೀಲಿಸಲು ಮತ್ತು ಯಾವುದಾದರು ಬೆಳವಣಿಗೆಗಳ ಕುರಿತು ಅಧಿಕೃತ ಮೂಲಗಳಿಂದ ಮಾತ್ರ ಮಾಹಿತಿ ಪಡೆಯಲು ಸೂಚಿಸಲಾಗಿದೆ.

<><><>

ಬಣ್ಣಗಳ ಹಬ್ಬವಾದ ಹೋಳಿಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ. ಈ ಹಬ್ಬವು ದುಷ್ಟತನದ ಮೇಲೆ ಒಳ್ಳೆಯದರ ವಿಜಯವನ್ನು ಹಾಗೂ ವಸಂತ ಋತುವಿನ ಆರಂಭವನ್ನು ಸೂಚಿಸುತ್ತದೆ. ಜಾತಿ, ಮತ, ಬಣ್ಣ, ವಯಸ್ಸು ಮತ್ತು ಲಿಂಗ ಭೇದವಿಲ್ಲದೆ ಸಮಾಜದ ಎಲ್ಲಾ ವರ್ಗಗಳು ಹೋಳಿಯನ್ನು ಬಹಳ ಉತ್ಸಾಹದಿಂದ ಆಚರಿಸುವುದರಿಂದ ಈ ಹಬ್ಬ ಸಮಾನತೆ ಮತ್ತು ಭ್ರಾತೃತ್ವದ ಸಂದೇಶವನ್ನೂ ನೀಡುತ್ತದೆ. ಹೋಳಿ ಹಬ್ಬದ ಸಂದರ್ಭದಲ್ಲಿ ಸಾಮಾಜಿಕ ಜಾಲತಾಣದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್ ಸೇರಿದಂತೆ ಅನೇಕ ಗಣ್ಯರು ದೇಶದ ಸಮಸ್ತ ಜನತೆಗೆ ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಹೋಳಿ ಹಬ್ಬವು ಸಾಮಾಜಿಕ ಸಾಮರಸ್ಯದ ಸಂದೇಶವನ್ನು ನೀಡುವ ಹಬ್ಬವಾಗಿದ್ದು, ವೈವಿಧ್ಯತೆಯಲ್ಲಿ ಏಕತೆಯ ಸಂಕೇತವಾಗಿದೆ ಎಂದು ತಿಳಿಸಿದ್ದಾರೆ. ದೇಶದ ಶ್ರೀಮಂತ ಸಂಪ್ರದಾಯಗಳಲ್ಲಿ ಆಳವಾಗಿ ಬೇರೂರಿರುವ ಹೋಳಿ, ಸಹೋದರತ್ವ, ಪರಸ್ಪರ ಗೌರವವನ್ನು ಪ್ರತಿಬಿಂಬಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ತಿಳಿಸಿದ್ದಾರೆ. ತಮ್ಮ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಏಕತೆ ಮತ್ತು ಸಾಮರಸ್ಯದ ಮೌಲ್ಯಗಳನ್ನು ಬಲಪಡಿಸುವ ಈ ಹಬ್ಬ, ಪ್ರತಿಯೊಬ್ಬರ ಜೀವನದಲ್ಲಿ ಸಂತೋಷ, ಸಮೃದ್ಧಿ ಮತ್ತು ಯಶಸ್ಸಿನ ಬಣ್ಣಗಳನ್ನು ತುಂಬಲಿ ಎಂದು ಹಾರೈಸಿದ್ದಾರೆ.

<><><>

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯ ಪಶ್ಚಿಮ ಏಷ್ಯಾ ಪ್ರದೇಶ ವಿಭಾಗ, ಆ ಪ್ರದೇಶದಲ್ಲಿರುವ ಕೇಂದ್ರಗಳಲ್ಲಿ ನಾಳೆ ಮತ್ತು ನಾಡಿದ್ದು ನಡೆಯಬೇಕಿದ್ದ ೧೦ ಮತ್ತು ೧೨ ನೇ ತರಗತಿ ಪರೀಕ್ಷೆಗಳನ್ನು ಮುಂದೂಡಿದೆ. ಈ ಪರೀಕ್ಷೆಗಳಿಗೆ ಪರಿಷ್ಕೃತ ದಿನಾಂಕಗಳನ್ನು ನಂತರ ಪ್ರಕಟಿಸಲಾಗುವುದು. ಮಾರ್ಚ್ ೬ ರಿಂದ ನಿಗದಿಯಾಗಿರುವ ಪರೀಕ್ಷೆಗಳ ಬಗ್ಗೆ ನಾಳೆಯೊಳಗೆ ಪರಿಸ್ಥಿತಿಯನ್ನು ಪರಿಶೀಲಿಸಿದ ನಂತರ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಮಂಡಳಿ ತಿಳಿಸಿದೆ.

<><><>

೨೦೨೬ ರ ದ್ವೈವಾರ್ಷಿಕ ರಾಜ್ಯಸಭಾ ಚುನಾವಣೆಗೆ ಭಾರತೀಯ ಜನತಾ ಪಕ್ಷವು ಆರು ರಾಜ್ಯಗಳಿಂದ ಒಂಬತ್ತು ಅಭ್ಯರ್ಥಿಗಳನ್ನು ಘೋಷಿಸಿದೆ. ಐದು ಸ್ಥಾನಗಳು ಖಾಲಿ ಇರುವ ಬಿಹಾರದಿಂದ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಮತ್ತು ಬಿಜೆಪಿ ನಾಯಕ ಶಿವೇಶ್ ಕುಮಾರ್ ಅವರನ್ನು ನಾಮನಿರ್ದೇಶನ ಮಾಡಿದೆ. ನಾಮಪತ್ರ ಸಲ್ಲಿಸಲು ನಾಳೆ ಕೊನೆಯ ದಿನವಾಗಿದೆ.

<><><>

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಮುಕ್ತ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ವಿಭಾಗದ ಪಂದ್ಯದಲ್ಲಿಂದು ಭಾರತದ ಆಯೂಷ್ ಶೆಟ್ಟಿ, ಇಂಡೋನೇಷಿಯಾದ ಅಲ್ವಿ ಫರ್ಹಾನ್ ಅವರನ್ನು ಎದುರಿಸಲಿದ್ದಾರೆ. ಪುರುಷರ ಡಬಲ್ಸ್ ವಿಭಾಗದ ಪಂದ್ಯದಲ್ಲಿಂದು ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿ ರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ಮಲೇಷಿಯಾದ ಕಾಂಗ್ ಖೈ ಝಿಂಗ್‌ನ ಮತ್ತು ಎರಾನ್ ತೈ ವಿರುದ್ಧ ಸೆಣಸಲಿದೆ. ಮಿಶ್ರ ಡಬಲ್ಸ್ ವಿಭಾಗದಲ್ಲಿ ಭಾರತದ ರೋಹನ್ ಕಪೂರ್ ಮತ್ತು ಋತ್ವಿಕಾ ಗಡ್ಡೆ ಜೋಡಿ, ಫ್ರಾನ್ಸ್ ಜೋಡಿಯನ್ನು ಎದುರಿಸಲಿದೆ. ಇದಕ್ಕೂ ಮುನ್ನ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಲಕ್ಷ್ಯ ಸೇನ್ ಮೊದಲ ಸುತ್ತಿನಲ್ಲಿ ಗೆಲುವು ದಾಖಲಿಸಿ, ೧೬ರ ಸುತ್ತನ್ನ ಪ್ರವೇಶಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>